## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1068 |
| ಸದಸ್ಯರ ಹೆಸರು | : | ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 22.09.2022. |
| ಉತ್ತರಿಸುವವರು | : | ಮಾನ್ಯ ಮುಖ್ಯಮಂತ್ರಿಗಳು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಇರುವ ಗ್ರೇಡ್-1 ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು; ಗ್ರೇಡ್-2 ಗ್ರಾಮ ಪಂಚಾಯಿತಿಗಳನ್ನು ಜನಸಂಖ್ಯೆ ಆಧಾರದ ಮೇಲೆ ಗ್ರೇಡ್-1 ಗ್ರಾಮ ಪಂಚಾಯಿತಿಗಳಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಯಾವ ಹಂತದಲ್ಲಿದೆ; | ರಾಜ್ಯದಲ್ಲಿ ಪ್ರಸ್ತುತ 5955 ಗ್ರಾಮ ಪಂಚಾಯತಿಗಳಿದ್ದು, ಈ ಪೈಕಿ 2165 ಗ್ರೇಡ್-1 ಗ್ರಾಮ ಪಂಚಾಯತಿಗಳು ಮತ್ತು 3790 ಗ್ರೇಡ್-2 ಗ್ರಾಮ ಪಂಚಾಯತಿಗಳಿರುತ್ತವೆ.<br><br>1257 ಗ್ರೇಡ್-2 ಗ್ರಾಮ ಪಂಚಾಯತಿಗಳನ್ನು ಜನಸಂಖ್ಯೆ ಆಧಾರದ ಮೇಲೆ ಗ್ರೇಡ್-1 ಗ್ರಾಮ ಪಂಚಾಯತಿಗಳನ್ನಾಗಿ ಮೇಲ್ದರ್ಜೇಗೇರಿಸಲು ಉದ್ದೇಶಿಸಲಾಗಿತ್ತು. ಪ್ರಸ್ತುತ ಹಣಕಾಸಿನ ನಿರ್ಬಂಧದಿಂದಾಗಿ ಪ್ರಸ್ತಾವನೆಯನ್ನು ಒಪ್ಪಿರುವುದಿಲ್ಲ. |
| (ಆ) | ಗ್ರಾಮ ಪಂಚಾಯಿತಿಗಳ ಕಾರ್ಯದರ್ಶಿ (ಗ್ರೇಡ್-1) ಹುದ್ದೆಗೆ ಪದೋನ್ನತಿಗೆ ಪರಿಗಣಿಸುವಾಗ ಸಮಾನ ವೇತನ ಶ್ರೇಣಿ ಇರುವ ಕಾರ್ಯದರ್ಶಿ (ಗ್ರೇಡ್-2) ಮತ್ತು ದ್ವಿತಿಯ ದರ್ಜೆ ಲೆಕ್ಕ ಸಹಾಯಕರನ್ನು 3:2 ಬದಲಾಗಿ 1:1 ಅನುಪಾತದಲ್ಲಿ ಪರಿಗಣಿಸಬಹುದಲ್ಲವೆ; | ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ ಆಡಳಿತ ಶಾಖೆ) (ವೃಂದ ಮತ್ತು ನೇಮಕಾತಿ) ನಿಯಮಗಳು, 2008 ರಲ್ಲಿ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದ ಶೇ 50 ರಷ್ಟು ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಮತ್ತು ಶೇ 50 ರಷ್ಟು ಹುದ್ದೆಗಳನ್ನು ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-2 ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದಿಂದ 3:2 ಅನುಪಾತದಲ್ಲಿ ಮುಂಬಡ್ತಿ ಮೂಲಕ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ.<br><br>3:2 ಬದಲಾಗಿ 1:1 ಅನುಪಾತದಲ್ಲಿ ಪರಿಗಣಿಸುವ ಪ್ರಸ್ತಾವನೆ ಇರುವುದಿಲ್ಲ. |
| (ಇ) | ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಹುದ್ದೆಗಳಿಗೆ ಪ್ರಥಮ ದರ್ಜೆ ಸಹಾಯಕ ಮತ್ತು ಲೆಕ್ಕ ಅಧೀಕ್ಷಕರ ಹುದ್ದೆಗೆ ಮುಂಬಡ್ತಿ ನೀಡಲು ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? | ರಾಜ್ಯದ ಗ್ರಾಮ ಪಂಚಾಯತಿಗಳಿಗೆ 2579 ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಹುದ್ದೆಗಳು ಮಂಜೂರಾಗಿ ಆ ವೃಂದದಲ್ಲಿ ನೌಕರರು ಕರ್ತವ್ಯ ನಿರ್ವಹಿಸುತ್ತಿರುವುದರಿಂದ ಜಿಲ್ಲಾ ಮತ್ತು ಪಂಚಾಯತಿಗಳಲ್ಲಿ ಮಂಜೂರಾಗಿರುವ ಪ್ರಥಮ ದರ್ಜೆ ಲೆಕ್ಕ ಸಹಾಯಕ ಮತ್ತು ಲೆಕ್ಕಾಧೀಕ್ಷರ ಹುದ್ದೆಗಳನ್ನು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದಿಂದ ಮುಂಬಡ್ತಿ ಮೂಲಕ ಭರ್ತಿ ಮಾಡಲು ಕರ್ನಾಟಕ ಸಾಮಾನ್ಯ ಸೇವೆ (ಪಂಚಾಯತ್ ರಾಜ್ ವಿಭಾಗ) (ವೃಂದ ಮತ್ತು ನೇಮಕಾತಿ) ನಿಯಮಗಳು, 2020 ಕ್ಕೆ ತಿದ್ದುಪಡಿ ತರುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ. |

ಸಂ. ಗ್ರಾಅಪ 312 ಗ್ರಾಪಂಅ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ